14

# ಕರ್ನಾಟಕ ಸರ್ಕಾರ
## ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ
## (ಜನಸ್ಪಂದನ ಕೋಶ)

ಸಂಖ್ಯೆ :ಸಿಆಸುಇ:20:ಆರ್‌ಟಿಐ:2010

ಕರ್ನಾಟಕ ಸರ್ಕಾರದ ಸಚಿವಾಲಯ,
3ನೇ ಮಹಡಿ, ಪೋಡಿಯಂ ಬ್ಲಾಕ್,
ವಿಶ್ವೇಶ್ವರಯ್ಯ ಗೋಪುರ,
ಬೆಂಗಳೂರು, ದಿನಾಂಕ:24.08.2011

## ಸುತ್ತೋಲೆ

ವಿಷಯ : ಮಾಹಿತಿ ಹಕ್ಕು ಅಧಿನಿಯಮ-2005ನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಬಗ್ಗೆ.

------

ಮಾಹಿತಿ ಹಕ್ಕು ಅಧಿನಿಯಮ-2005 ಜಾರಿಗೆ ಬಂದು ಆರು ವರ್ಷಗಳು ಕಳೆದಿದ್ದರೂ ಈಗಲೂ ಈ ಅಧಿನಿಯಮಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ಅಂಶಗಳ ಮೇಲೆ ಇನ್ನೂ ಹಲವು ಇಲಾಖೆಗಳು ಕ್ರಮಜರುಗಿಸಿಲ್ಲವೆಂದು ಸರ್ಕಾರಕ್ಕೆ ದೂರುಗಳು ಬಂದಿವೆ. ಆದುದರಿಂದ ಮಾಹಿತಿ ಹಕ್ಕು ಅಧಿನಿಯಮ-2005ರನ್ವಯ ಸಾರ್ವಜನಿಕರಿಗೆ ಮಾಹಿತಿ ಪಡೆಯುವ ಹಕ್ಕಿಗಾಗಿ ಅನುಕೂಲ ಮಾಡಿಕೊಡುವ ಜವಾಬ್ದಾರಿಯು ಸರ್ಕಾರದ್ದಾಗಿರುತ್ತದೆ. ಈ ಕಾಯ್ದೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಈ ಕೆಳಕಂಡ ಅಂಶಗಳನ್ನು ಪಾಲಿಸುವಂತೆ ಕೋರಲಾಗಿದೆ.

1. ಮಾಹಿತಿ ಹಕ್ಕು ಅಧಿನಿಯ 2005ರ ಕಲಂ 4(1)(ಎ)ರನ್ವಯ ಎಲ್ಲಾ ಸರ್ಕಾರಿ ಇಲಾಖೆಗಳು ಹಾಗೂ ಕಚೇರಿಗಳಲ್ಲಿ ಮಾಹಿತಿ ಪಡೆಯಲು ಅನುಕೂಲವಾಗುವಂತೆ ಕ್ರಮಬದ್ಧವಾದ ವಿಷಯಪಟ್ಟಿ ಮತ್ತು ಸೂಚಿಪಟ್ಟಿಯನ್ನೊಳಗೊಂಡ ಎಲ್ಲಾ ದಾಖಲೆಗಳನ್ನು ನಿರ್ವಹಿಸತಕ್ಕದ್ದು ಹಾಗೂ ಮಾಹಿತಿಯನ್ನು ಕಾಲಕಾಲಕ್ಕೆ ಪರಿಷ್ಕರಿಸತಕ್ಕದ್ದು. ಹಾಗೆಯೇ ಸದರಿ ಅಧಿನಿಯಮದ ಕಲಂ 4(1)(ಬಿ)ರನ್ವಯ ಎಲ್ಲಾ ಸಾರ್ವಜನಿಕ ಪ್ರಾಧಿಕಾರಗಳು, ಆಯಾ ಇಲಾಖೆಯಲ್ಲಿನ ಸಹಾಯಕ ಸಾರ್ವಜನಿಕ ಮಾಹಿತಿ ಅಧಿಕಾರಿಗಳ, ಸಾರ್ವಜನಿಕ ಮಾಹಿತಿ ಅಧಿಕಾರಿಗಳ, ಮೇಲ್ಮನವಿ ಪ್ರಾಧಿಕಾರಿಗಳ ಹೆಸರು, ಹುದ್ದೆಗಳನ್ನು ಸದರಿ ಕಲಂನಲ್ಲಿ ತಿಳಿಸಿರುವಂತೆ ಇತರ ವಿವರಗಳೊಂದಿಗೆ ಕಚೇರಿಗಳ ಮುಂಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸತಕ್ಕದ್ದು. ಹಾಗೆಯೇ ಈ ಎಲ್ಲ ವಿವರಗಳನ್ನು ಕಲಂ 4(2)ರನ್ವಯ ಸ್ವಪ್ರೇರಿತವಾಗಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕ್ರಮಜರುಗಿಸತಕ್ಕದ್ದು.

2. ಅರ್ಜಿದಾರರು ಮಾಹಿತಿಗಾಗಿ ಕೋರಿಕೆ ಸಲ್ಲಿಸುವಾಗ ಅರ್ಜಿಯ ಜೊತೆಗೆ ಶುಲ್ಕವನ್ನು ಪ್ರಾಧಿಕಾರದ ಸಾರ್ವಜನಿಕ ಮಾಹಿತಿ ಅಧಿಕಾರಿ ಹೆಸರಿನಲ್ಲಿ ಪೇ-ಆರ್ಡರ್, ಇಂಡಿಯನ್ ಪೋಸ್ಟಲ್ ಆರ್ಡರ್, ಮನಿ ಆರ್ಡರ್, ಬ್ಯಾಂಕರ್ಸ್ ಚೆಕ್, ಡಿ.ಡಿ ಅಥವಾ ನಗದು ರೂಪದಲ್ಲಿ ನೀಡಿದಾಗ ಅದನ್ನು ಅಂಗೀಕರಿಸತಕ್ಕದ್ದು. ಅರ್ಜಿದಾರರಿಂದ ನಿಗದಿತ ಅರ್ಜಿಯ ಶುಲ್ಕಸಂದಾಯವಾದ ಬಗ್ಗೆ ಪರಿಶೀಲಿಸಿ ಮಾಹಿತಿಯನ್ನು ನೀಡಲು ಸೂಕ್ತ ಕ್ರಮಕೈಗೊಳ್ಳತಕ್ಕದ್ದು. ಶುಲ್ಕವನ್ನು

-2-

ಸ್ವೀಕರಿಸಿದ ನಂತರ ಅದನ್ನು ನಿಯಮಾನುಸಾರ ಲೆಕ್ಕ ಶೀರ್ಷಿಕೆ "0070-60-118-0-01" "Receipt under Right to Information Act 2005" ಗೆ ಜಮಾ ಮಾಡತಕ್ಕದ್ದು. ಮಾಹಿತಿಯು ಬೇರೆ ಇಲಾಖೆಗೆ ಸಂಬಂಧಿಸಿದಲ್ಲಿ ಮಾಹಿತಿ ಹಕ್ಕು ಅಧಿನಿಯಮ 2005ರ ಕಲಂ6(3)ರನ್ವಯ ಅರ್ಜಿಯನ್ನು ಐದು ದಿನಗಳೊಳಗಾಗಿ ವರ್ಗಾಯಿಸಿ ಅರ್ಜಿದಾರರಿಗೆ ಸೂಕ್ತ ಮಾಹಿತಿ ನೀಡತಕ್ಕದ್ದು.

3. ಅರ್ಜಿದಾರನು ಮೇಲ್ಮನವಿ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿದಲ್ಲಿ ಮೇಲ್ವನವಿ ಪ್ರಾಧಿಕಾರವು ನಿಗದಿತ ಕಾಲಾವಧಿಯೊಳಗೆ ಮೇಲ್ಮನವಿಯ ಮೇಲೆ ಆದೇಶ ಮಾಡತಕ್ಕದ್ದು.
4. ಮೇಲ್ಮನವಿ ಪ್ರಾಧಿಕಾರದ ಆದೇಶದ ನಂತರ ಅರ್ಜಿದಾರರು ಇಚ್ಛಿಸಿದಲ್ಲಿ ಸದರಿ ಆದೇಶದ ವಿರುದ್ಧ ಕರ್ನಾಟಕ ಮಾಹಿತಿ ಆಯೋಗಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.
5. ಭಾರತ ಸರ್ಕಾರವು ಮಾಹಿತಿ ಹಕ್ಕು ಅಧಿನಿಯಮ-2005ರಡಿಯಲ್ಲಿ ನಿಗಧಿಪಡಿಸಿರುವ ಲಾಂಛನ(logo)ವನ್ನು ಪ್ರಚುರಪಡಿಸಲು ಎಲ್ಲ ಅಗತ್ಯ ಕ್ರಮ ಜರುಗಿಸತಕ್ಕದ್ದು.

ಮಾಹಿತಿ ಹಕ್ಕು ಅಧಿನಿಯಮ-2005ರ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಮತ್ತು ಇಲಾಖೆಗಳ ಮುಖ್ಯಸ್ಥರು ತಮ್ಮ ಇಲಾಖೆಯ ವ್ಯಾಪ್ತಿಯಲ್ಲಿ ಮೇಲ್ಕಂಡ ಅಂಶಗಳನ್ನು ಪಾಲಿಸಲಾಗುತ್ತಿರುವ ಬಗ್ಗೆ ದೃಢಪಡಿಸಿಕೊಳ್ಳಬೇಕು.

ಲ. ವೆಂಕಟಗಿರಿಯಪ್ಪ
(ಲ.ವೆಂಕಟಗಿರಿಯಪ್ಪ) 24/8/11
ಸರ್ಕಾರದ ಅಧೀನ ಕಾರ್ಯದರ್ಶಿಗಳು,
ಸಿಆಸುಇ (ಜನಸ್ಪಂದನ ಕೋಶ- ಮಾಹಿತಿ ಹಕ್ಕು)

ಇವರಿಗೆ,

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಯವರು/ಕಾರ್ಯದರ್ಶಿಯವರು,
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳು,
3. ಎಲ್ಲಾ ಜಿಲ್ಲಾಧಿಕಾರಿ/ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,/ಪೊಲೀಸ್ ವರಿಷ್ಠಾಧಿಕಾರಿಗಳು.